# ಕನ್ನಡ ಪೋಸ್ಟ್

KANNADA POST

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

ಕನ್ನಡ ದಿನಪತ್ರಿಕೆ

ಹಾಸನ   E-mail : kannadapostnews@gmail.com   / ಕನ್ನಡ post   Price: ₹1

Vol.No.02 | Issue. 121 | Pages. 2 | Date: 15-04-2026, WEDNESDAY   RNI NO: KARKAN/2024/89601   Kannada Daily

ಸಂಪುಟ : 02 – ಸಂಚಿಕೆ : 121 – ಪುಟಗಳು : 2   15-04-2026   ಬುಧವಾರ   Ph: 8762954248   ದರ : ₹1


## ಜಿಲ್ಲಾದ್ಯಂತ ಸಂವಿಧಾನ ಶಿಲ್ಪಿಯ ಸ್ಮರಣೆ

### ಬಾಬಾ ಸಾಹೇಬರ ಭಾವಚಿತ್ರ ಮೆರವಣಿಗೆ: ಅಂಬೇಡ್ಕರ್ ಆದರ್ಶ ಪಾಲನೆಗೆ ಕರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರ ಹಾಗೂ ಜಿಲ್ಲಾದ್ಯಂತ ಮಂಗಳವಾರ ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮವನ್ನು ಅರ್ಥ ಪೂರ್ಣವಾಗಿ ಆಚರಿಸಲಾಯಿತು.

ಜಿಲ್ಲಾಡಳಿತದ ವತಿಯಿಂದ ನಗರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಸೇರಿದಂತೆ ಅಧಿಕಾರಿಗಳು ಹಾಗೂ ವಿವಿಧ ಸಂಘಟನೆ ಮುಖಂಡರು ಭಾಗಿಯಾಗಿ ಬಾಬಾ ಸಾಹೇಬರನ್ನು ಸ್ಮರಿಸಿದರು.

ಮೊದಲಿಗೆ ಜಿಲ್ಲಾಧಿಕಾರಿ ಕಚೇರಿ ಬಳಿಯಿರುವ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪ್ರತಿಮೆಗೆ



ಮಾಲಾರ್ಪಣೆ ಮಾಡಿ ಕಾರ್ಯಕ್ರಮಕ್ಕೆ ಶಾಸಕರು ಚಾಲನೆ ನೀಡಿದರು.

ನಂತರ ಮುಖ್ಯ ರಸ್ತೆಗಳಲ್ಲಿ ಕಲಾ ತಂಡಗಳೊಂದಿಗೆ ಹಾಸನಾಂಬ ಕಲಾಕ್ಷೇತ್ರದ ವರೆಗೂ ಕಾಲ್ನಡಿಗೆಯಲ್ಲಿ ಹೆಜ್ಜೆ ಹಾಕಿದರು.

ಶಾಸಕಾಂಗ, ಕಾರ್ಯಾಂಗ, ನ್ಯಾಯಾಂಗ ಪದ್ಧತಿಗಳನ್ನು ರೂಪಿಸಿ ಕಾನೂನು ಚೌಕಟ್ಟಿನಲ್ಲಿ ಎಲ್ಲರೂ ತಮ್ಮ-ತಮ್ಮ ಜವಾಬ್ದಾರಿಗಳನ್ನು ನಿಭಾಯಿಸಲು ಸಂವಿಧಾನದಲ್ಲಿ ಅವಕಾಶ ನೀಡಿದ ಕೀರ್ತಿ ಬಾಬಾಸಾಹೇಬ್ ಅಂಬೇಡ್ಕರ್ ಅವರಿಗೆ ಸಲ್ಲುತ್ತದೆ, ಇಂದು ನಮ್ಮ ದೇಶ ಮಾತ್ರವಲ್ಲದೆ ವಿವಿಧ ದೇಶಗಳಲ್ಲಿ ಕೂಡ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಜನ್ಮ ದಿನಾಚರಣೆಯನ್ನು ಆಚರಿಸುತ್ತಿರುವುದು ಅವರ ಕೊಡುಗೆಗೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಬಾಬಾಸಾಹೇಬರು ಅಂಬೇಡ್ಕರ್ ಕೇವಲ ಒಬ್ಬರು ವ್ಯಕ್ತಿಯಲ್ಲ, ಅವರೊಂದು ಶಕ್ತಿ ಅವರ ಸಂವಿಧಾನದ ರಚನೆ ಹಿಂದಿನ ಅನ್ವೇಷಣೆ ತರ್ಕಕ್ಕೆ ನಿಲುಕದ್ದಾಗಿದೆ ಎಂದು ಶಾಸಕರು ಗುಣಗಾನ ಮಾಡಿದರು.

ಸಮಾನತೆಯ ಹರಿಕಾರ ಡಾ. ಅಂಬೇಡ್ಕರ್ ವಿಶ್ವಕ್ಕೆ ಶ್ರೇಷ್ಠ ಸಂವಿಧಾನ ನೀಡುವ ಮೂಲಕ ಮಾದರಿಯಾಗಿದ್ದಾರೆ, ಮಹಿಳೆಯರಿಗೂ ಸಂವಿಧಾನದಲ್ಲಿ ವಿಶೇಷ ಸ್ಥಾನಮಾನ ನೀಡಿರುವುದು ಹೆಮ್ಮೆಯ ಸಂಗತಿ, ಅವರ ತತ್ವ ಆದರ್ಶಗಳನ್ನು ಇತರರಿಗೂ ತಿಳಿಸುವ ಮೂಲಕ ಅವರ ಸಮ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈ ಜೋಡಿಸಬೇಕು.

ಶಿಕ್ಷಣ, ಸಂಘಟನೆ ಹಾಗೂ ಹೋರಾಟದ ಮೂಲಕ ತಮ್ಮ ಹಕ್ಕುಗಳನ್ನು ಪಡೆಯಬಹುದು ಎಂಬ ಮಾತುಗಳನ್ನು ಹೇಳುವ ಮೂಲಕ ಸಮ ಸಮಾಜ ನಿರ್ಮಾಣಕ್ಕೆ ಶ್ರಮಿಸಿದ ಮಹಾನ್ ಮಾನವತಾವಾದಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ತತ್ವ ಆದರ್ಶಗಳನ್ನು ಪಾಲಿಸಬೇಕು ಎಂದು ಕರೆ ನೀಡಿದರು.

## ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಎ. ಮಂಜು ಭಾಷಣಕ್ಕೆ ಅಡ್ಡಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಕಲಗೂಡು: ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮದ ವೇಳೆ ಶಾಸಕರ ಭಾಷಣಕ್ಕೆ ಅಡ್ಡಿಪಡಿಸಿದ ಘಟನೆ ಪಟ್ಟಣದಲ್ಲಿ ಮಂಗಳವಾರ ನಡೆಯಿತು

ಪಟ್ಟಣದ ತಾಲ್ಲೂಕು ಕಚೇರಿ ಆವರಣದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮಾಜಿ ಸಚಿವ ಹಾಗೂ ಶಾಸಕ ಎ. ಮಂಜು ಭಾಷಣ ಮಾಡುತ್ತಿದ್ದ ವೇಳೆ, ದಲಿತ ಸಂಘರ್ಷ ಸಮಿತಿ ಮುಖಂಡ ನಟರಾಜ್ ಏಕಾಏಕಿ ಎದ್ದು ನಿಂತು ಆಕ್ರೋಶ ವ್ಯಕ್ತಪಡಿಸಿದರು.

''ನೀವು ದಲಿತ ವಿರೋಧಿ ಶಾಸಕರು. ಬರೀ ಹಿಂದೂಗಳ ಪರವಾಗಿದ್ದೀರಿ'' ಎಂದು ಕೂಗಿದರು.

ಇದರಿಂದ ಆಕ್ರೋಶಗೊಂಡ ಶಾಸಕ ಎ. ಮಂಜು, ಕೂತ್ಕೊಳ್ತೀಯಾ ಇಲ್ವಾ? ಜಾಸ್ತಿ ಮಾತನಾಡಿದ್ರೆ, ಅಷ್ಟೇ. ನಿನ್ನ ಸರ್ಟಿಫಿಕೇಟ್ ನನಗೆ ಬೇಕಾಗಿಲ್ಲ ಎಂದು ತೀವ್ರವಾಗಿ ಪ್ರತಿಕ್ರಿಯಿಸಿದರು.

ಇದಕ್ಕೆ ಪ್ರತಿಯಾಗಿ ನಟರಾಜ್, ನಾನು ಕುಳಿತುಕೊಳ್ಳಲ್ಲ. ನಿಮ್ಮ ಸರ್ಟಿಫಿಕೇಟ್ ನನಗೂ ಬೇಕಾಗಿಲ್ಲ ಎಂದು ಹೇಳಿ ವಾಗ್ವಾದ ಮುಂದುವರಿಸಿದರು.

ಸ್ಥಿತಿ ತೀವ್ರಗೊಳ್ಳುತ್ತಿದ್ದಂತೆ, ಪೊಲೀಸರನ್ನು ಕರೆಸಿ, ಅವರನ್ನು ಹೊರಗೆ ಕಳುಹಿಸಿ ಎಂದು ಶಾಸಕ ಸೂಚಿಸಿದರು.



ಈ ವೇಳೆ ಕಾರ್ಯಕ್ರಮದಲ್ಲಿ ಕೆಲಕಾಲ ಗೊಂದಲದ ವಾತಾವರಣ ನಿರ್ಮಾಣವಾಯಿತು.

ವಾಗ್ವಾದದ ಮಧ್ಯೆ ಎ. ಮಂಜು, ನಿನಗೆ ದಲಿತ ವಿರೋಧಿ ಅನ್ನಿಸ್ತಿದ್ರೆ, ನನ್ನ ಹತ್ತಿರ ಮೊದಲು ಸಹಾಯ ಪಡೆದಿರುವುದು ನೀನೇ. ನಿನಗೆ ಮತ್ತು ನಿನ್ನ ಕುಟುಂಬಕ್ಕೆ ಸಹಾಯ ಮಾಡಿದ್ದೇನೆ'' ಎಂದು ಹೇಳಿದರು.

ಪೊಲೀಸರು ಮಧ್ಯಪ್ರವೇಶಿಸಿ ನಟರಾಜ್ ಅವರನ್ನು ಕಾರ್ಯಕ್ರಮದಿಂದ ಹೊರಗೆ ಕರೆದೊಯ್ದು ನಂತರ ಕಾರ್ಯಕ್ರಮ ಮುಂದುವರಿಯಿತು.

ದಸಂಸ ಮುಖಂಡ ನಟರಾಜ್ ಪರಾಜಿತ ಕಾಂಗ್ರೆಸ್ ಅಭ್ಯರ್ಥಿ ಶ್ರೀಧರ್ ಗೌಡ ಅವರ ಬೆಂಬಲಿಗ ಎನ್ನಲಾಗಿದೆ.

## ಅಂಬೇಡ್ಕರ್ ಪ್ರತಿಮೆಗಿಲ್ಲ ಅಲಂಕಾರ: ಪ್ರತಿಭಟನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ತಾಲ್ಲೂಕು ಆಡಳಿತ ತೀವ್ರ ಅಪಮಾನ ಮಾಡಿದ್ದು, ಶೀಘ್ರವೇ ಸಂಬಂಧಿಸಿದ ತಹಸೀಲ್ದಾರ್ ಹಾಗೂ ಅಧಿಕಾರಿಗಳನ್ನು ಅಮಾನತು ಮಾಡಬೇಕು ಎಂದು ಇಲ್ಲಿನ ದಲಿತ ಸಂಘಟನೆಗಳ ಮುಖಂಡರು, ಶಾಸಕ ಹೆಚ್.ಕೆ.ಸುರೇಶ್ ನೇತೃತ್ವದಲ್ಲಿ ತಾಲ್ಲೂಕು ಕಚೇರಿ ಮುಂಭಾಗದ ಅಂಬೇಡ್ಕರ್ ಪುತ್ಥಳಿ ಬಳಿ ಪ್ರತಿಭಟನೆ ನಡೆಸಿ ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಇಲ್ಲಿನ ಅಂಬೇಡ್ಕರ್ ಪುತ್ಥಳಿಗೆ ಬೇಕಾಬಿಟ್ಟಿ ಅಲಂಕಾರ ಮಾಡಿದ್ದಾರೆ. ಯಾವುದೇ ಅಚ್ಚುಕಟ್ಟಾದ ವ್ಯವಸ್ಥೆ ಮಾಡಿಲ್ಲ ಎಂದು ಆರೋಪಿಸಿದರು.

ದಲಿತ ಸಂಘಟನೆಗಳ ನಿಲುವು ಬೆಂಬಲಿಸಿದ ಶಾಸಕ ಎಚ್.ಕೆ.ಸುರೇಶ್, ಅಂಬೇಡ್ಕರ್ ಅವರಿಗೆ ಯಾರೇ ಅವಮಾನ ಮಾಡಿದರೂ ಅದು ಖಂಡನೀಯ ಎಂದು ಹೇಳಿ ಪ್ರತಿಭಟನೆಯಲ್ಲಿ ಭಾಗಿಯಾದರು.

ಈ ವೇಳೆ ಜಯಂತಿ ಕಾರ್ಯಕ್ರಮ ಬಹಿಷ್ಕಾರ ಮಾಡುವ ಮೂಲಕ ದಲಿತ ಸಂಘಟನೆಗಳ ಜೊತೆಗೆ ತಾಲ್ಲೂಕು ಆಡಳಿತದ ವಿರುದ್ಧ ದಿಕ್ಕಾರ ಹಾಕುತ್ತಾ



ಹೊರ ನಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕರು, ವಿಶ್ವದಾದ್ಯಂತ ಅಂಬೇಡ್ಕರ್ ಜನ್ಮ ದಿನಾಚರಣೆಯನ್ನು ಅತ್ಯಂತ ಭಕ್ತಿ ಭಾವದಿಂದ ಆಚರಿಸುತ್ತಿದ್ದಾರೆ. ಅದರೆ ಬೇಲೂರು ತಾಲ್ಲೂಕು ಆಡಳಿತ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದ ದಿನ ಕನಿಷ್ಠ ವಿಶೇಷ ಅಲಂಕಾರ ಮತ್ತು ಅಚ್ಚುಕಟ್ಟಾಗಿ ಸಮಾರಂಭ ನಡೆಸಲು ಸಂಪೂರ್ಣ ವಿಫಲವಾಗಿದ್ದಾರೆ ಎಂದು ಕಿಡಿ ಕಾರಿದರು.

ತಾಲ್ಲೂಕು ಆಡಳಿತದಿಂದ ಇತ್ತೀಚಿನ ದಿನಗಳಲ್ಲಿ ಹಗಲು ದರೋಡೆ ನಡೆಯುತ್ತಿದೆ. ಮಧ್ಯವರ್ತಿಗಳ ಹಾವಳಿಯಿಂದ ಬಡವರಿಗೆ ಮತ್ತು ಮಹಿಳೆಯರ ಯಾವುದೇ ಕೆಲಸ ಮಾಡುತ್ತಿಲ್ಲ, ಸ್ವತಃ ತಹಸೀಲ್ದಾರ್ ಇಲ್ಲಿನ ಭ್ರಷ್ಟಾಚಾರಕ್ಕೆ ಕುಮ್ಮಕ್ಕು ನೀಡುತ್ತಿದ್ದಾರೆ ಎಂದು ಗಂಭೀರ ಆರೋಪ ಮಾಡಿದರು.

ದಲಿತ ಸಂಘಟನೆ ಮುಖಂಡರಾದ ಪರ್ವತಯ್ಯ, ರಮೇಶ್, ಚಂದ್ರಶೇಖರ ಮತ್ತು ಎಂ.ಜಿ.ವೆಂಕಟೇಶ , ಶೋಷಿತರ ಮತ್ತು ಬಡವರ ಪಾಲಿನ ಆಶಾಕಿರಣವಾದ ಅಂಬೇಡ್ಕರ್ ಅವರಿಗೆ ಇಡೀ ಜಗತ್ತು ಗೌರವ ನೀಡುತ್ತದೆ. ಅಂಬೇಡ್ಕರ್ ನೀಡಿದ ಸಂವಿಧಾನದ ಅಡಿಯಲ್ಲಿ ಕರ್ತವ್ಯ ನಿರ್ವಹಿಸುವ ಅಧಿಕಾರಿಗಳು ಅಂಬೇಡ್ಕರ್ ಎಂಬ ಮಹಾನ್ ವ್ಯಕ್ತಿಗೆ ಅವಮಾನ ಎಸಗುವುದು ನಿಜಕ್ಕೂ ಶೋಚನೀಯ ಎಂದು ಅಸಮಾಧಾನ ಹೊರ ಹಾಕಿದರು.

ಅವಮಾನ ಮಾಡಿರುವ ತಹಸೀಲ್ದಾರ್ ಅವರನ್ನು ತಕ್ಷಣ ಅಮಾನತು ಮಾಡಬೇಕು ಹಾಗೂ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಆಗಮಿಸಬೇಕು ಎಂದು ಅಂಬೇಡ್ಕರ್ ಪುತ್ಥಳಿ ಬಳಿ ಕುಳಿತು ಪಟ್ಟು ಹಿಡಿದರು.

ಮಧ್ಯ ಪ್ರವೇಶಿಸಿದ ಶಾಸಕರು, ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುತ್ತಿರುವುದರಿಂದ ಇಂದು ಸ್ಥಳಕ್ಕೆ ಆಗಮಿಸಲು ಸಾಧ್ಯವಾಗುವುದಿಲ್ಲ ದಯಮಾಡಿ ಎಲ್ಲರೂ ಶಾಂತ ರೀತಿಯಿಂದ ಇರುವಂತೆ ಮನವಿ ಮಾಡಿದರು. ಈಗಾಗಲೇ ಜಿಲ್ಲಾಧಿಕಾರಿ ಮತ್ತು ಸಂಬಂಧಪಟ್ಟ ಸಚಿವರಿಗೆ ತಹಶೀಲ್ದಾರ್ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ತಿಳಿಸಲಾಗಿದೆ ಎಂದರು.

ಇದೇ ವೇಳೆ ಪ್ರತಿಭಟನೆ ನಂತರ ಏ.15ರ ಬೆಳಿಗ್ಗೆ 10 ಗಂಟೆಗೆ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ಪ್ರತಿಭಟನೆ ನಡೆಸಲು ದಲಿತ ಸಂಘಟನೆಗಳು ನಿರ್ಧರಿಸಿವೆ.

ಬಿಜೆಪಿ ಅಧ್ಯಕ್ಷ ಸಂಜುಕೌರಿ. ಬಿಜೆಪಿ ಮಾಜಿ ಅಧ್ಯಕ್ಷ ರೇಣುಕುಮಾರ್, ಜಿಪಂ ಮಾಜಿ ಸದಸ್ಯ ಸಿ.ಎಸ್.ಪ್ರಕಾಶ್, ಕಾಂಗ್ರೆಸ್ ಮುಖಂಡ ಗ್ರಾನೈಟ್ ರಾಜಶೇಖರ, ದಲಿತ ಮುಖಂಡರಾದ ಈಶ್ವರ್ ಪ್ರಸಾದ್, ಗೋವಿನಹಳ್ಳಿ ರವಿ. ಮಂಜುನಾಥ, ಬಸವರಾಜು, ನೂರ್ ಅಹಮದ್ ಇದ್ದರು.

## ಕಾಂಗ್ರೆಸ್ ಕಚೇರಿಯಲಿ ಅಂಬೇಡ್ಕರ್ ಜಯಂತಿ ಆಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಜಿಲ್ಲಾ ಕಾಂಗ್ರೆಸ್ ಪಕ್ಷದ ಕಚೇರಿಯಲ್ಲಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮದಿನದ ಅಂಗವಾಗಿ ಜಯಂತಿಯನ್ನು ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಿ ಅಂಬೇಡ್ಕರ್ ಅವರ ಸೇವೆಗಳನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪಟೇಲ್ ಶಿವಪ್ಪ ಮಾತನಾಡಿ, ಸಂವಿಧಾನದಲ್ಲಿ ಅಡಕವಾಗಿರುವ ಮೀಸಲಾತಿಗಳಿಂದ ಇಂದಿನ ಸಮಾಜದಲ್ಲಿ ಮಹತ್ತರ ಬದಲಾವಣೆ ಕಂಡುಬಂದಿದೆ ಎಂದು ಹೇಳಿದರು. ಶಿಕ್ಷಣ ಹಾಗೂ ಆರ್ಥಿಕ ಕ್ಷೇತ್ರಗಳಲ್ಲಿ ಹಿಂದುಳಿದ ವರ್ಗಗಳಿಗೆ ಅವಕಾಶ ಸಿಕ್ಕಿರುವುದು ಅಂಬೇಡ್ಕರ್ ಅವರ ದೂರದೃಷ್ಟಿಯ ಫಲ ಎಂದು ಅವರು ಅಭಿಪ್ರಾಯಪಟ್ಟರು. ವಿವಿಧ ರೀತಿಯ ಮೀಸಲಾತಿಗಳ ಮೂಲಕ ಸಮಾಜದ ಎಲ್ಲ ವರ್ಗಗಳಿಗೂ ಸಮಾನ ಅವಕಾಶ ಕಲ್ಪಿಸಿದ ಮಹಾನ್ ನಾಯಕ ಅಂಬೇಡ್ಕರ್ ಎಂದು ಕೊಂಡಾಡಿದರು.ಅಂಬೇಡ್ಕರ್ ಅವರು ''ಶಿಕ್ಷಣ, ಸಂಘಟನೆ ಮತ್ತು ಹೋರಾಟ'' ಎಂಬ ಮಂತ್ರದ ಮೂಲಕ ಸಮಾನತೆ ಸ್ಥಾಪಿಸಲು ಶ್ರಮಿಸಿದ್ದು, ಅವರ ತತ್ವಗಳನ್ನು ಅನುಸರಿಸುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗುತ್ತದೆ ಎಂದು ಹೇಳಿದರು.

ಕಾಂಗ್ರೆಸ್ ಪಕ್ಷದ ಹಿರಿಯ ಮುಖಂಡ ಮುನಿಸ್ವಾಮಿ ಮಾತನಾಡಿ, ಇಂದಿನ ಸಮಾಜದಲ್ಲೂ ಅಸ್ಪೃಶ್ಯತೆ ಮತ್ತು ಭಿನ್ನತೆ ಸಂಪೂರ್ಣವಾಗಿ ನಿರ್ಮೂಲವಾಗಿಲ್ಲ ಎಂದು ವಿಷಾದ ವ್ಯಕ್ತಪಡಿಸಿದರು. ಎಷ್ಟೇ ಶಿಕ್ಷಣ ಪಡೆದರೂ ಸಮಾಜದಲ್ಲಿ ಇನ್ನೂ ಕೆಲ ಅಸಮಾನತೆಗಳು ಜೀವಂತವಾಗಿರುವುದನ್ನು ಒಪ್ಪಿಕೊಳ್ಳಬೇಕಾಗಿದೆ ಎಂದರು. ಇಂತಹ ಸಮಸ್ಯೆಗಳನ್ನು ನಿವಾರಿಸಲು ಶಿಕ್ಷಣ ಮತ್ತು ಸಂಘಟಿತ ಹೋರಾಟ ಅತ್ಯಗತ್ಯವಾಗಿದೆ ಎಂದು ತಿಳಿಸಿದರು. ತಾವು ಕಾಂಗ್ರೆಸ್ ಪಕ್ಷದಲ್ಲಿ 35 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದರೂ ಸೂಕ್ತ ಸ್ಥಾನಮಾನ ದೊರಕಿಲ್ಲ ಎಂಬ ಅಸಮಾಧಾನವನ್ನೂ ಅವರು ವ್ಯಕ್ತಪಡಿಸಿದರು. ಅಂಬೇಡ್ಕರ್ ಅವರು ಹೇಳಿದ ಮಾತುಗಳು ಮತ್ತು ತತ್ವಗಳು ಇಂದಿಗೂ ಪ್ರಸ್ತುತವಾಗಿದ್ದು, ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅವಶ್ಯಕ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕಾಂಗ್ರೆಸ್ ಪ್ರಚಾರ ಸಮಿತಿ ಜಿಲ್ಲಾ ಅಧ್ಯಕ್ಷ ದೇವರಾಜೇಗೌಡ, ರಘು ದಾಸರಕೊಪ್ಪಲು, ಮಲ್ಲಿಗೆವಾಳ್ ದೇವಪ್ಪ, ರಾಮಚಂದ್ರ, ಅಶೋಕ್, ಪ್ರಕಾಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಡಾ.ಬಿ.ಆರ್ ಅಂಬೇಡ್ಕರ್ ಜನ್ಮದಿನಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಅರಸೀಕೆರೆ : ತಾಲೂಕು ಆಡಳಿತ, ನಗರಸಭೆ ಸೇರಿದಂತೆ ರಾಜಕೀಯ ಪಕ್ಷಗಳು, ದಲಿತ ಪರ ಸಂಘಟನೆಗಳು, ಪ್ರತ್ಯೇಕವಾಗಿ ಡಾ.ಬಿ.ಆರ್ ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆಯನ್ನು ಆಚರಿಸುವ ಮೂಲಕ ಸಂವಿಧಾನ ಶಿಲ್ಪಿಗೆ ತಾಲೂಕಿನ ಜನತೆ ಗೌರವ ಸಮರ್ಪಿಸಿದರು.

ಇಂದು ತಾಲೂಕು ಆಡಳಿತದ ವತಿಯಿಂದ ತಾಲೂಕು ಕಚೇರಿ ಆವರಣದಲ್ಲಿ ಸರಳವಾಗಿ ಅಂಬೇಡ್ಕರ್ ಜಯಂತಿ ಆಚರಣೆ ಮಾಡಲಾಯಿತು.

ಜಿಲ್ಲಾ ಬಿಜೆಪಿ ಅಧ್ಯಕ್ಷ ನಾಗೇಂದ್ರ ಅವರ ನೇತೃತ್ವದಲ್ಲಿ ತಾಲೂಕಿನ ಬಿಜೆಪಿ ಮುಖಂಡರು ನಗರದ ಅಂಬೇಡ್ಕರ್ ವೃತ್ತದಲ್ಲಿರುವ ಅಂಬೇಡ್ಕರ್ ಅವರ ಬೃಹತ್ ಪ್ರತಿಮೆಗೆ ಮಾಲಾರ್ಪಣೆ ಮಾಡುವುದರೊಂದಿಗೆ ಅಂಬೇಡ್ಕರ್ ಜಯಂತಿ ಆಚರಿಸಿದರು.

ಕಾಂಗ್ರೆಸ್‌ನ ಜಿಲ್ಲಾ ಸಾಮಾಜಿಕ ನ್ಯಾಯ ಸಮಿತಿ ಹಾಗೂ ಚಲವಾದಿ ಮಹಾಸಭಾ ವತಿಯಿಂದ ನಗರದ ಪಿಪಿ ವೃತ್ತದಲ್ಲಿ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು.

ಶಾಸಕ ಕೆ.ಎಂ ಶಿವಲಿಂಗೇಗೌಡ, ಜಿಲ್ಲಾ ಸಾಮಾಜಿಕ ನ್ಯಾಯ ಸಮಿತಿ ಅಧ್ಯಕ್ಷ ವೆಂಕಟೇಶ್ ಸೇರಿ ಕಾಂಗ್ರೆಸ್ ಮುಖಂಡರು ಪಾಲ್ಗೊಂಡು ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವುದರೊಂದಿಗೆ ಗೌರವ ಸಮರ್ಪಿಸಿದರು.

ಮತ್ತೊಂದೆಡೆ ಆದಿ ಜಾಂಬವ ಸಮಾಜದ ವತಿಯಿಂದ ನಗರದ ಸಿಂಧೂ ಭವನದಲ್ಲಿ ಆಯೋಜಿಸಿದ್ದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದಲ್ಲಿ ಆದಿ ಜಾಂಬವ ಸಮಾಜದ ನೂರಾರು ಮಂದಿ ಪಾಲ್ಗೊಂಡು ತಮ್ಮ ನೆಚ್ಚಿನ ನಾಯಕನ ಜನ್ಮದಿನಾಚರಣೆ ಆಚರಿಸಿದರಲ್ಲದೆ ಸಮಾಜದ ಸಂಘಟನೆ ಕುರಿತು ಸಮಾಜದ ಮುಖಂಡರು ಮಾತನಾಡಿದರು.

## ಪತ್ರಕರ್ತರ ಭವನದಲ್ಲಿ ಅಂಬೇಡ್ಕರ್ ಜಯಂತಿ ಆಚರಣೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ಪತ್ರಕರ್ತರ ಸಂಘದಲ್ಲಿ ಮಂಗಳವಾರ ಬಾಬಾ ಸಾಹೇಬ್ ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ಆಚರಣೆ ಹಾಗೂ ಉದ್ಯೋಗ್ ಯೋಗದಾನ್ ಪ್ರಶಸ್ತಿ ಪಡೆದಿರುವ ಕೆಪಿಎಸ್ ಪ್ರಮೋದ್ ಅಭಿನಂದನಾ ಸಮಾರಂಭ ಆಯೋಜಿಸಲಾಗಿತ್ತು.

ಆರಂಭದಲ್ಲಿ ಮಾತನಾಡಿದ ಸಂಘದ ಮಾಜಿ ಅಧ್ಯಕ್ಷರಾದ ಲೀಲಾವತಿ ಮಾತನಾಡಿ, ಇತ್ತೀಚೆಗೆ ಸಂಘದಲ್ಲಿ ಸಾಂಸ್ಕೃತಿಕ ಸೇರಿದಂತೆ ಗುಣಾತ್ಮಕ ಕಾರ್ಯಕ್ರಮ ನಡೆಯುತ್ತಿವೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಮತ್ತೊಬ್ಬ ಮಾಜಿ ಅಧ್ಯಕ್ಷ ಬಿ.ಆರ್.ಉದಯಕುಮಾರ್ ಮಾತನಾಡಿ, ಸಂಘದಲ್ಲಿ ನಿರಂತರವಾಗಿ ವಿಭಿನ್ನ ಚಟುವಟಿಕೆ ನಡೆಯಬೇಕು. ಅದಕ್ಕೆ ಎಲ್ಲರ ಸಹಕಾರ ಇರಬೇಕು, ಮಹನೀಯರ ಸ್ಮರಣೆ ಎಲ್ಲರ ಆದ್ಯ ಕರ್ತವ್ಯ, ಸಮಾಜದಲ್ಲಿ ಎಲ್ಲ ವರ್ಗಗಳಿಗೆ ಸಮಾನತೆ, ಹಕ್ಕು ಒದಗಿಸಿಕೊಟ್ಟವರು ಅಂಬೇಡ್ಕರ್ ಎಂದರು. ಹಾಗೆಯೇ ಪ್ರಮೋದ್ ಅವರು ಅನೇಕ ವರ್ಷಗಳಿಂದ ಅಮೋಘ ವಾಹಿನಿ ಮೂಲಕ ಜನಮೆಚ್ಚುಗೆಗೆ ಪಾತ್ರರಾಗಿದ್ದಾರೆ ಎಂದರು.


ಇನ್ನೊಬ್ಬ ಮಾಜಿ ಅಧ್ಯಕ್ಷ ರವಿ ನಾಕಲಗೂಡು ಮಾತನಾಡಿ, ಇದೊಂದು ಅರ್ಥಪೂರ್ಣ ಆಚರಣೆ, ಪೌರ ಕಾರ್ಮಿಕರ ಅಭಿನಂದಿಸುವುದು ಉತ್ತಮ ಕಾರ್ಯ, ನಿರಂತರ ದಾಸೋಹದ ಮೂಲಕ ಹಾಸನ ಜಿಲ್ಲಾ ಪತ್ರಕರ್ತರ ಇಡೀ ರಾಜ್ಯಕ್ಕೆ ಮಾದರಿ ಆಗಿದೆ. ಈ ಬಗ್ಗೆ ಎಲ್ಲರೂ ಮಾತನಾಡುತ್ತಿದ್ದಾರೆ. ಅಧ್ಯಕ್ಷ ಯಾರೆಂಬುದು ಮುಖ್ಯ ಅಲ್ಲ, ಮಾಡುವ ಕೆಲಸ ಮುಖ್ಯ ಎಂದ ಅವರು, ಎಲ್ಲರಿಗೂ ಸಮಾನತೆ ಸಾರಿದ ಅಂಬೇಡ್ಕರ್ ಆದರ್ಶ ಎಲ್ಲರಿಗೂ ಮಾದರಿ ಎಂದರು.

ಸಂಘದ ಉಪಾಧ್ಯಕ್ಷ ಜಿ.ಪ್ರಕಾಶ್, ಜಿಲ್ಲಾ ಕಾರ್ಯಕಾರಿ



ಸಮಿತಿ ಸದಸ್ಯ ಹೆಚ್.ವಿ.ಸುರೇಶ್ ಕುಮಾರ್, ಪ್ರಕಾಶಮಾನ ಪತ್ರಿಕೆ ಸಂಪಾದಕ ಸ್ವಾಗತ್ ಎಂ.ಎಸ್, ಟಿ.ವಿ.9 ಜಿಲ್ಲಾ ವರದಿಗಾರ ಕೆ.ಬಿ.ಮಂಜುನಾಥ್, ಎಸ್.ಡಿ.ರಂಗಸ್ವಾಮಿ, ಕಾರ್ಯದರ್ಶಿಗಳಾದ ಖುಷ್ವಂತ್, ಬಿ.ಆರ್.ಬೊಮ್ಮೇಗೌಡ, ಬೇಲೂರು ತಾಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಬಿ.ಶಿವರಾಜು, ಆಲೂರು ಅಧ್ಯಕ್ಷ ಆದಿಲ್ ಪಾಷ ಮೊದಲಾದವರು ತಮ್ಮ ಅನಿಸಿಕೆ ವ್ಯಕ್ತಪಡಿಸಿ, ಅಂಬೇಡ್ಕರ್ ಜಯಂತಿ ಆಚರಣೆ ಜೊತೆಗೆ ನಾವೆಷ್ಟು ಮಂದಿ ಅಂಬೇಡ್ಕರ್ ಅವರನ್ನು ಪಾಲನೆ ಮಾಡುತ್ತಿದ್ದೇವೆ ಎಂಬ ಬಗ್ಗೆ ಆತ್ಮ ವಿಮರ್ಶೆ ಮಾಡಿಕೊಳ್ಳಬೇಕಿದೆ ಎಂದರು. ಅಂಬೇಡ್ಕರ್ ಸಂವಿಧಾನ ಶಿಲ್ಪಿ ಮಾತ್ರವಲ್ಲ, ಪತ್ರಕರ್ತರಾಗಿಯೂ ಜನರಿಗಾಗಿ, ಮಹಿಳೆಯರಿಗಾಗಿ ಕೆಲಸ ಮಾಡಿದರು. ಯಾವುದೇ ಅಡೆತಡೆ ಎದುರಾದರೂ ಹೋರಾಟ ಬಿಡಲಿಲ್ಲ. ಅವರ ದಾರಿಯಲ್ಲಿ ನಾವೂ ನಡೆದರೆ, ಸಂವಿಧಾನಕ್ಕೆ ಎದುರಾಗಿರುವ ಆಪತ್ತು ತಡೆಯುವ ಕೆಲಸ ಮಾಡಿದರೆ ಜಯಂತಿ ಆಚರಣೆಗೆ ಅರ್ಥ ಬರಲಿದೆ ಎಂದರು. ಅವರಂತೆ ನಾವೂ ಜ್ಞಾನವಂತರಾಗಿ ಮೌಢ್ಯ ತೊಳೆಯುವ ಕೆಲಸ ಮಾಡಬೇಕಿದೆ ಎಂದರು.

> ಅಧ್ಯಕ್ಷರಾದ ಜೆ.ಆರ್.ಕೆಂಚೇಗೌಡರು ಮಾತನಾಡಿ, ಇಂದು ಅಂಬೇಡ್ಕರ್ ಜಯಂತಿ ಆಚರಣೆ ಜೊತೆಗೆ ಪೌರ ಕಾರ್ಮಿಕರನ್ನು ಸನ್ಮಾನ ಮಾಡಿರುವುದು ಸಂತಸ ನೀಡಿದೆ. ಮುಂದೆಯೂ ಹೀಗೆಯೇ ಕಾರ್ಯಕ್ರಮ ಮಾಡುವ ಆಸೆ ಇದ್ದು, ಎಲ್ಲರೂ ಕೈಜೋಡಿಸಿ ಎಂದು ಮನವಿ ಮಾಡಿದರು. ನನ್ನೊಂದಿಗೆ ಉತ್ತಮ ತಂಡ ಇರುವುದರಿಂದ ಒಳ್ಳೆಯ ಕೆಲಸ ಮಾಡಲು ಸಾಧ್ಯವಾಗಿದೆ ಎಂದರು.
>
> ಇದಕ್ಕೂ ಮುನ್ನ ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್ ಪ್ರಾಸ್ತವಿಕವಾಗಿ ಮಾತನಾಡಿದರು. ಖಜಾಂಚಿ ಪ್ರಕಾಶ್ ಬೆಳವಾಡಿ ಸ್ವಾಗತಿಸಿದರೆ, ಕಾರ್ಯದರ್ಶಿ ಕೆ.ಎಂ.ಹರೀಶ್ ನಿರೂಪಿಸಿದರು.



ಕೆಯೂಡಬ್ಲ್ಯೂಜೆ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಮಾತನಾಡಿ, ಜಿಲ್ಲೆಯಲ್ಲಿ ಕಳೆದ ಹಲವು ವರ್ಷಗಳಿಂದ ಆಕಾಶ್ ಸಿ.ಟಿ.ಕೇಬಲ್, ನಂತರ ಶ್ರೀರಾಮ ಸಿಟಿ ಕೇಬಲ್, 2006 ರಿಂದ ಅಮೋಘ ವಾಹಿನಿ ಬೆಳೆದು ಬಂದ ಹಾದಿ ವಿವರಿಸಿದರು.

ಇಲ್ಲಿ ಕೆಲಸ ಮಾಡಿದ ಅನೇಕರು ವಿವಿಧ ಅದರಲ್ಲೂ ರಾಜ್ಯಮಟ್ಟದ ಸುದ್ದಿವಾಹಿನಿಗಳಲ್ಲಿ ಕೆಲಸ ಮಾಡುತ್ತಿದ್ದಾರೆ. ಪ್ರಮೋದ್ ಅವರು ಒಂದು ಒಳ್ಳೆಯ ತಂಡ ಕಟ್ಟಿ,



> ಇದೇ ವೇಳೆ ಅಂಬೇಡ್ಕರ್ ಜಯಂತಿ ಅಂಗವಾಗಿ ಹಾಸನ ಮಹಾನಗರ ಪಾಲಿಕೆ ಮಹಿಳಾ ಪೌರ ಕಾರ್ಮಿಕರಾದ ಮಂಜಮ್ಮ ಹಾಗೂ ಅಶ್ವಿನಿ ಅವರನ್ನು ಪತ್ರಕರ್ತರ ಸಂಘದ ವತಿಯಿಂದ ಫಲ ತಾಂಬೂಲ, ಸೀರೆ ನೀಡಿ ಸನ್ಮಾನಿಸಿ ಗೌರವಿಸಲಾಯಿತು.

ಅಮೋಘ್ ವಾಹಿನಿಯನ್ನು ಕಲರ್ ಫುಲ್ ಮಾಡಿದ್ದಾರೆ. ಇದೀಗ ಎಲ್ಲೆಡೆ ವಿಸ್ತರಣೆ ಮಾಡುವ ಪ್ರಯತ್ನದಲ್ಲಿದ್ದಾರೆ. ಮುಂದೆ ರಾಜ್ಯಮಟ್ಟದ ಚಾನೆಲ್ ಆಗಿ ಬೆಳೆಯಲಿ ಎಂದು ಆಶಿಸಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಕೆ.ಪಿ.ಎಸ್.ಪ್ರಮೋದ್ ಹಾಸನದಲ್ಲಿ ಮೊದಲ ಬಾರಿಗೆ 1992 ರಲ್ಲಿ ಹೆಚ್‌ಸಿಎನ್ ವಾಹಿನಿ ಮೂಲಕ ಸುದ್ದಿ ಚಾನೆಲ್ ಆರಂಭಿಸಿದೆವು. ಅದಕ್ಕೆ ದಿ.ರಾಜ್ ಕುಮಾರ್ ಸಹಕಾರ ನೀಡಿದ್ದರು. ಆಗಲೇ ನಾವು ಮಹಾಮಸ್ತಕಾಭಿಷೇಕ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಲೈವ್ ಪ್ರಸಾರ ಮಾಡಿದ್ದೆವು.

20 ವರ್ಷದಿಂದ ಅಮೋಘ್ ವಾಹಿನಿ ಮುನ್ನಡೆಸುತ್ತಿದ್ದೇನೆ. ಈಗ ರಾಜ್ಯದ ವಿವಿಧೆಡೆ ಪ್ರಸಾರ ಆಗುತ್ತಿದೆ. ಇದಕ್ಕೆ ಅನಿತಾ ಕುಮಾರಸ್ವಾಮಿ, ಮದನಗೌಡ, ರಂಗಸ್ವಾಮಿ ಅವರು ಸಹಕಾರ ನೀಡಿದ್ದಾರೆ ಎಂದು ಸ್ಮರಿಸಿದರು.

# ಬದುಕು ಗಟ್ಟಿಗೊಳಿಸಿಕೊಳ್ಳುವ ಪ್ರಯತ್ನ ಸದಾ ನಮ್ಮದಾಗಿರಬೇಕು

## ಒಳಮೀಸಲಾತಿ ಜಾರಿಯಾಗದೇ ಇರುವುದಕ್ಕೆ ರಾಜಕೀಯ ಇಚ್ಛಾಶಕ್ತಿಯ ಕೊರತೆಯೇ ಕಾರಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ : ಮಾದಿಗರಲ್ಲಿ ಸಂಘಟನೆ, ಸಾಮರಸ್ಯ ಹೆಚ್ಚಾಗಬೇಕು, ಶೈಕ್ಷಣಿಕವಾಗಿ ಹಾಗೂ ಆರ್ಥಿಕವಾಗಿ ಸದೃಢವಾಗಬೇಕು. ಬದುಕಿನಲ್ಲಿ ಗಟ್ಟಿಯಾಗುವ ಪ್ರಯತ್ನ ಸದಾ ನಮ್ಮದಾಗಿರಬೇಕು, ನಮಗೆ ಈ ಸಮಯ ಪಡೆದುಕೊಳ್ಳುವ ಸಮಯ ಇದರ ಸದುಪಯೋಗವನ್ನು ಒಳ ಮೀಸಲಾತಿ ಜಾರಿ ಮಾಡಿಸಿಕೊಳ್ಳುವ ಮೂಲಕ ಪಡೆದುಕೊಳ್ಳಬೇಕು ಎಂದು ಆದಿಜಾಂಬವ ಸಂಸ್ಥಾನ ಕೋಡಿಹಳ್ಳಿ ಮಠದ ಶ್ರೀ ಶ್ರೀ ಶ್ರೀ ಷಡಕ್ಷರಿ ಮುನಿ1 ಸ್ವಾಮೀಜಿ ಹೇಳಿದರು.

ನಗರದ ಸಿಂಧು ಭವನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾದಿಗ ಸಮುದಾಯಕ್ಕೆ ಈ ಸಮಯ ಬಹು ಮುಖ್ಯವಾದ ಸಮಯ ದಶಕಗಳಿಂದ ಕಳೆದುಕೊಂಡಿದ್ದನ್ನು ಪಡೆದುಕೊಳ್ಳುವ ಸಮಯ, ಈ ಸಮಯದಲ್ಲಿ ನಾವು ಮೈ ಮರೆಯಬಾರದು ಎಂದು ಕಿವಿ ಮಾತು ಹೇಳಿದರು.

ರಾಜ್ಯದಲ್ಲಿ ಮಾದಿಗ ಸಮುದಾಯ ಅತಿ ಹೆಚ್ಚಿದ್ದು, ನಮಗೆ ಮೀಸಲಾತಿಯಲ್ಲಿ ಸಿಗುತ್ತಿರುವ ಪಾಲು ಅತಿ ಕಡಿಮೆಯಿದೆ. ಈ ತಾರತಮ್ಯ ಕೊನೆಯಾಗಬೇಕಾದರೆ ಒಳ ಮೀಸಲಾತಿ ಜಾರಿಯಾಗಲು ಬೇಕಾದ ಹೋರಾಟಗಳನ್ನು ಒಗ್ಗಟ್ಟಾಗಿ ಮಾಡಬೇಕು.

ಯಾವುದೇ ಸರ್ಕಾರ ನಮ್ಮ ಕಡೆ ಗಮನ ಹರಿಸಬೇಕೆಂದರೆ ನಮ್ಮ ಒಗ್ಗಟ್ಟು ಅತಿ ಮುಖ್ಯ, ಸರ್ಕಾರಕ್ಕೆ ಮಾದಿಗ ಸಮುದಾಯಕ್ಕಾಗುತ್ತಿರುವ ಅನ್ಯಾಯವನ್ನು ಮನವರಿಕೆ ಮಾಡಿಕೊಳ್ಳುವ ಕೆಲಸ ಈಗಾಗಲೇ ಮಾಡಲಾಗಿದೆ. ಇರುವ ಒಂದು ತಟ್ಟೆಯ ಅನ್ನದಲ್ಲಿ ನೂರಾರು ಕೈಗಳಿಗೆ ಅವಕಾಶ ಕೊಟ್ಟು ನಮಗೆ ಅನ್ಯಾಯ ಮಾಡಿದ್ದನ್ನು ಸಹಿಸಿಕೊಳ್ಳುವ ಕೆಲಸ ಕೈಬಿಟ್ಟು ಆಗಿರುವ ಅನ್ಯಾಯ ವನ್ನು ಸರಿಪಡಿಸಿಕೊಳ್ಳುವ ಕೆಲಸವನ್ನು ಮಾಡಬೇಕಿದೆ.



### ಒಳಮಿಸಲಾತಿ ವಿಚಾರವಾಗಿ ಸರ್ಕಾರದ ನಿರ್ಲಕ್ಷ್ಯಕ್ಕೆ ತಕ್ಕ ಪಾಠ ಕಲಿಸುತ್ತೇವೆ ; ನಾಗವೇದಿ ಶೇಖರಪ್ಪ

ಸರ್ಕಾರ ಕುಂಟುನೆಪಮೊಡ್ಡಿ ಒಳಮೀಸಲಾತಿ ನೀಡದೇ ವಂಚಿಸುತ್ತಿದೆ. ಸಮುದಾಯದ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಜಾರಿಯಾಗಬೇಕು. ಇಂಥ ನಿರ್ಲಕ್ಷ್ಯದ ವಿರುದ್ಧ ಹೋರಾಟದ ಸ್ವರೂಪ ಬದಲಿಸಿ ಮುಂದಿನ ಚುನಾವಣೆಗಳಲ್ಲಿ ಕಾಂಗ್ರೆಸ್‌ಗೆ ತಕ್ಕಪಾಠ ಕಲಿಸಬೇಕಾಗುತ್ತದೆ.

ನ್ಯಾಯಮೂರ್ತಿ ಎ.ಜೆ. ಸದಾಶಿವ ಆಯೋಗದ ವರದಿ ಶಿಫಾರಸು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಸಮುದಾಯ ಮುಂದಾಗುತ್ತದೆ.

ಅಷ್ಟೇ ಅಲ್ಲದೆ ಇದೇ ಆಗಸ್ಟ್ 1ರಂದು ಸುಪ್ರೀಂ ಕೋರ್ಟ್‌ನ 7 ನ್ಯಾಯಧೀಶರ ಪೀಠ ಪರಿಶಿಷ್ಟ ಜಾತಿಗಳಲ್ಲಿ ಒಳಮೀಸಲಾತಿಯನ್ನು ಜಾರಿಗೊಳಿಸುವ ಅಧಿಕಾರವನ್ನು ರಾಜ್ಯ ಸರ್ಕಾರಗಳಿಗೆ ನೀಡಿದೆ.

ಈ ಅಧಿಕಾರ ರಾಜ್ಯ ಸರ್ಕಾರಗಳಿಗೆ ವ್ಯಾಪ್ತಿಯಾಗಿದೆ. ಈ ನಿಟ್ಟಿನಲ್ಲಿ ಸರ್ಕಾರ ಕಾರ್ಯಪ್ರವೃತ್ತವಾಗಬೇಕು ಇಲ್ಲವಾದಲ್ಲಿ ಮಾದಿಗ ಶಕ್ತಿ ಎಂತದ್ದು ಎಂಬುದು ರಾಜಕೀಯ ಪಕ್ಷಗಳಿಗೆ ತಿಳಿಯಲಿದೆ.

ಈ ವೇಳೆ ಮುಖ್ಯ ಭಾಷಣಕರಾಗಿ ಆಗಮಿಸಿದ್ದ ಭೀಮ ಶಂಕರ್ ಅವರು ಮಾತನಾಡಿ, ಈಗಿನ ರಾಜ್ಯಸರ್ಕಾರಕ್ಕೆ ರಾಜಕೀಯ ಹಿತಾಸಕ್ತಿ ಇಲ್ಲ. ಒಳಮೀಸಲಾತಿ ವಿಚಾರದಲ್ಲಿ ಹೆಚ್ಚುವರಿ ಮೀಸಲಾತಿ ಕಲ್ಪಿಸಲು ಮೀನಮೇಷ ಎಣಿಸುತ್ತಿದ್ದು, ಮಾದಿಗರಿಗೆ ನ್ಯಾಯ ದೊರಕಿಸಿಕೊಡುವ ಹಿಚ್ಚಶಕ್ತಿಯೂ ಸಹ ಈ ಸರ್ಕಾರ ಇಲ್ಲದಿರುವುದು ವಿಪರ್ಯಾಸ.

ಮೀಸಲಾತಿ ವಿಚಾರದಲ್ಲಿ ಯಾವುದೇ ರೀತಿಯ ಕಾನೂನಿನ ತೊಡಕಿಲ್ಲದೆ ಇದ್ದರೂ ಸಹ ರಾಜಕೀಯ ಪಕ್ಷಗಳ ಹೆಚ್ಚಶಕ್ತಿಯ ಕೊರತೆ ಒಳಮೀಸಲಾತಿಗೆ ಹಾಗೂ ಮಾದಿಗರಿಗೆ ಸಿಗಬೇಕಾದ ನ್ಯಾಯಕ್ಕೆ ತಡೆಯಾಗಿದೆ.

ಸುಪ್ರೀಂ ಕೋರ್ಟ್ ಈಗಾಗಲೇ ಎಲ್ಲ ರಾಜ್ಯಗಳು ಒಳಮೀಸಲಾತಿ ಜಾರಿ ಮಾಡಬೇಕು ಎಂದು ಆದೇಶ ಮಾಡಿದೆ. ಆದರೂ ಸಹ ನ್ಯಾಯಾಲಯದ ಆದೇಶವನ್ನು ವರದಿಗಳ ನೆಪದಲ್ಲಿ, ರೋಸ್ಟರ್ ಅಲಾಟ್ಮೆಂಟ್ ನೆಪದಲ್ಲಿ ತಳ್ಳಿಹಾಕುವ ಕೆಲಸ ಮಾಡುತ್ತಿವೆ. ರಾಜ್ಯದ ಒಟ್ಟು ಎಸ್ಸಿಗಳಲ್ಲಿ ಶೇಕಡಾ 36ರಷ್ಟು ಜನಸಂಖ್ಯೆ ಹೊಂದಿರುವ ಮಾದಿಗರಿಗೆ ಸರ್ಕಾರ ಹಾಗೂ ರಾಜಕೀಯ ಪಕ್ಷಗಳು ಅನ್ಯಾಯ ಮಾಡುತ್ತಿದೆ. ಎಲ್ಲಾ ರೀತಿಯ ಸಮಿತಿಯ ವರದಿಗಳಲ್ಲಿಯೂ ಸಹ ಮಾದಿಗರ ಜನಸಂಖ್ಯೆ ಹೆಚ್ಚಾಗಿಯೇ ಇದೆ. ಅದರೂ ಸಹ ರಾಜಕೀಯ ಇಚ್ಛಾ ಶಕ್ತಿಯ ಕೊರತೆಯಿದೆ ಒಳ ಮೀಸಲಾತಿ ಜಾರಿ ಯಾಗಲು ಸಾಧ್ಯವಾಗುತ್ತಿಲ್ಲ. ಈ ನಿಟ್ಟಿನಲ್ಲಿ ಮಾದಿಗ ಸಮುದಾಯ ಯಾವ ನಿರ್ಧಾರ ಕೈಗೊಳ್ಳಬೇಕು ಹೋರಾಟಗಳು ಹೇಗೆ ಇರಬೇಕು ಎಂಬ ಬಗ್ಗೆ ಗಮನ ಹರಿಸಿ ಸಂಘಟನೆ ಮಾಡಬೇಕಿದೆ ಎಂದರು.

ಇದೇ ವೇಳೆ ಹಸಿರು ಕ್ರಾಂತಿಯ ಹರಿಕಾರ, ಮಾಜಿ ಪ್ರಧಾನಿ ಜಗಜೀವನ ರಾಮ್ ಹಾಗೂ ಭಾರತ ರತ್ನ ಅಂಬೇಡ್ಕರ್ ಅವರ ಕುರಿತು ವಿಚಾರಗಳನ್ನು ತಿಳಿಸಲಾಯಿತು.

ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಡಾ.ಬಾಬು ಜಗಜೀವನ ರಾಮ್ ಅವರ ಜನ್ಮದಿನಾಚರಣೆಯನ್ನು ಅರಸೀಕೆರೆ ತಾಲ್ಲೂಕು ಮಾದಿಗ ಸಂಘಟನೆಗಳ ಒಕ್ಕೂಟದ ವತಿಯಿಂದ ಬೈಕ್ ರ?ಯಾಲಿ ಹಾಗೂ ಬೆಳ್ಳಿ ರಥೋತ್ಸವದ ಮೂಲಕ ವಿಜೃಂಭಣೆಯಿಂದ ಆಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಶಿವರಾಜ್ ಮೈಸೂರು ಮಾತನಾಡಿದರು, ನಾಗವೇದಿ ಕರಿಯಪ್ಪ ಸ್ವಾಗತಿಸಿದರು, ಸಿಡಿ ನಿಂಗಪ್ಪ ನಿರೂಪಿಸಿದರು, ಸಂಕೊಡನಹಳ್ಳಿ ಮಂಜುನಾಥ್ ಸನ್ಮಾನ ಸಮಾರಂಭ ನಡೆಸಿ ಕೊಟ್ಟರು, ಮೈಲನಹಳ್ಳಿ ಗುರು ಕಾರ್ಯಕ್ರಮದ ಉಸ್ತುವಾರಿಯನ್ನು ಯಶಸ್ವಿಯಾಗಿ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ನಾಗರಾಜ್ ಸ್ವಾಮಿ, ವೈದ್ಯರಾದ ಡಾ.ಶಿವಕುಮಾರ್, ನಿವೃತ್ತ ಇಂಜಿನಿಯರ್ ನಾಗವೇದಿ ಶೇಖರಪ್ಪ, ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯರಾದಾ ವತ್ಸಲಾ ಶೇಖರಪ್ಪ, ನಿವೃತ್ತ ಐಎಎಸ್ ಭೀಮಾ ಶಂಕರ್, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷರಾದ ಶಿವಮೂರ್ತಿ, ಮುಖಂಡರುಗಳಾದ ಎಂ.ಟಿ.ವೆಂಕಟೇಶ್, ಎ.ಪಿ. ಚಂದ್ರಯ್ಯ, ಗ್ರಾಮ ಪಂಚಾಯಿತಿ ಮಾಜಿ ಸದಸ್ಯ ಕರಗುಂದ ಧನಂಜಯ ಚೆಸ್ಕಾಂ ನ ನಾಮಿನೇಟೆಡ್ ಸದಸ್ಯ ಮಲ್ಲಿದೇವಿಹಳ್ಳಿ ಮಂಜುನಾಥ್, ಮಾಡಾಳು ರಂಗನಾಥ್, ದೇಶಾಣಿ ಶಂಕರಪ್ಪ, ಶ್ರೀನಿವಾಸ್, ರುಕ್ಮಿಣಿ ಜಯಕುಮಾರ್, ಮೈಲನಹಳ್ಳಿ ಗುರು, ಕೆ.ಡಿ.ಎಸ್.ಎಸ್ ಮಹೇಶ್ ಬಾಣಾವರ, ಭಾಸ್ಕರ್ ಜಾಜೂರು, ನೌಕರರ ಸಂಘದ ಹೊಂಗ್ಯಯ್ಯ, ಜವರಯ್ಯ, ರಾಜೇಂದ್ರ ನೀರಗುಂದ, ಅಟ್ಟಿಗಯ್ಯ, ಕೆಂಚಪ್ಪ, ಕಿರಣ್ ಅರಕೆರೆ, ಮಾಡಾಳು ದಾಸಪ್ಪ, ಗಿರೀಶ ದೇಶಾಣಿ, ಮಾಡಾಳು ಸೋಮಶೇಖರ್, ರೇಣುಕಪ್ಪ, ಹಬ್ಬನಗಟ್ಟ ರುದ್ರೇಶ್, ನಾಗವೇದಿ ಸಿದ್ದೇಶ್, ಪ್ರದೀಪ್ ಅರಕೆರೆ, ಗೋವಿಂದರಾಜು ಹೊಸೂರು, ಕಾಂತರಾಜು, ಬಸವರಾಜು, ಮಧು, ಮಾಡಳು ವಿಜಯ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಪ್ರತ್ಯೇಕ ಜಯಂತಿ ಆಚರಣೆ ಮೂಲಕ ಮಾದಿಗರ ಶಕ್ತಿ ಪ್ರದರ್ಶನವಾಗಿದೆ : ಗುತ್ತಿನಕೆರೆ ಶಿವಮೂರ್ತಿ

ಒಳಮೀಸಲಾತಿ ವಿಚಾರವಾಗಿ ಸರ್ಕಾರದ ಧೋರಣೆಯನ್ನು ಖಂಡಿಸಿ ಸರ್ಕಾರಿ ಕಾರ್ಯಕ್ರಮಗಳಿಂದ ದೂರ ಉಳಿದು ಮಾದಿಗ ಸಮುದಾಯವೇ ಪ್ರತ್ಯೇಕವಾಗಿ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಹಾಗೂ ಡಾ.ಬಾಬು ಜಗಜೀವನ ರಾಮ್ ಅವರ ಜನ್ಮ ದಿನಾಚರಣೆ ಮಾಡುವ ಮೂಲಕ ಒಳ ಮೀಸಲಾತಿ ಹೋರಾಟವನ್ನು ಮುಂದುವರಿಸಿದೆ. ಇನ್ನು ಮನುಷ್ಯನನ್ನು ಕೀಳಾಗಿ ನೋಡುವ ಮನಸ್ಥಿತಿ ಬದಲಾಗಬೇಕು, ಜಾತಿ ವ್ಯವಸ್ಥೆ ಬದಲಾಗಬೇಕು ಎಂದರೆ ಒಳ ಮೀಸಲಾತಿ ಜಾರಿಯಾಗಬೇಕು. ಒಳ ಮೀಸಲಾತಿಯಿಂದ ಶೈಕ್ಷಣಿಕ ಪ್ರಾತಿನಿಧ್ಯ, ಆರ್ಥಿಕ ಪ್ರಾತಿನಿಧ್ಯ, ಸಾಮಾಜಿಕ ಹಾಗೂ ಉದ್ಯೋಗದಲ್ಲಿ ಪ್ರಾತಿನಿಧ್ಯ ಸಿಗಲಿದ್ದು, ಮಾದಿಗರ ಜೀವನ ಶೈಲಿ, ಆರ್ಥಿಕ ಸ್ಥಿತಿಗತಿಗಳು ಬದಲಾವಣೆ ಆಗಲಿದ್ದು, ಸಮುದಾಯಕ್ಕೆ ಸಾಮಾಜಿಕವಾಗಿ ಇನ್ನಷ್ಟು ಗೌರವ, ಅಧಿಕಾರ, ಪ್ರಾತಿನಿಧ್ಯ ಸಿಗುತ್ತದೆ. ಇನ್ನು ರಾಜಕೀಯವಾಗಿ ಮಾದಿಗ ಸಮುದಾಯಕ್ಕೆ ಅನ್ಯಾಯವಾಗಿದೆ. ಇದಕ್ಕೆ ಮುಖ್ಯಕಾರಣವೇ ರಾಜಕೀಯ ಇಚ್ಛಾಶಕ್ತಿಯ ಕೊರತೆ, ಈ ನಿಟ್ಟಿನಲ್ಲಿ ಸಮುದಾಯ ಒಗ್ಗಟ್ಟಿನಿಂದ ನಿಲ್ಲಬೇಕು, ಹೋರಾಟ ರೂಪುರೇಷೆಗಳನ್ನು ಬದಲು ಮಾಡಿಕೊಂಡು ಸಂಘಟನೆಯ ಜೊತೆ ಜೊತೆಗೆ ಕಾನೂನಿನ ರೀತಿಯಲ್ಲಿ ಹೋರಾಟ ಮಾಡಬೇಕು. ಯಾವುದೇ ಪಕ್ಷದ ಸರ್ಕಾರವಿರಲಿ, ಯಾರೇ ಅಧಿಕಾರದಲ್ಲಿರಲಿ ನಮ್ಮ ಸಮುದಾಯಕ್ಕೆ ಸಿಗಬೇಕಾದ ಒಳ ಮೀಸಲಾತಿ ಸ್ವಾತಂತ್ರ್ಯ ಪಡೆಯಬೇಕು. ಅರಸೀಕೆರೆಯಲ್ಲಿ ಪ್ರಾರಂಭವಾಗಿರುವ ವೇದಿಕೆ ಒಳ ಮೀಸಲಾತಿ ಜಾರಿಯಾಗುವವರೆಗೂ ತನ್ನ ಹೋರಾಟವನ್ನು ನಿಲ್ಲಿಸುವುದಿಲ್ಲ. ಜೊತೆಗೆ ಒಳ ಮೀಸಲಾತಿ ವಿಚಾರವಾಗಿ ಸಿದ್ದರಾಮಯ್ಯ ಅವರ ನಡೆಯನ್ನು ಹಾಗೂ ಮಾದಿಗ ಸಮುದಾಯದ ಮೇಲಿನ ಸ್ಥಳೀಯ ಶಾಸಕರಾದ ಶಿವಲಿಂಗೇಗೌಡರ ಧೋರಣೆಯನ್ನು ಖಂಡಿಸುತ್ತ ಮುಂದಿನ ದಿನಗಳಲ್ಲಿ ತಮ್ಮ ನಡೆಯನ್ನು ಬದಲಿಸಿಕೊಳ್ಳಬೇಕು. ಕಾರ್ಯಕ್ರಮ ಯಶಸ್ವಿಗೆ ಕಾರಣರಾದ ಮಾದಿಗ ಸಮುದಾಯದ ಬಂಧುಗಳಿಗೆ ಧನ್ಯವಾದ ತಿಳಿಸಿದರು.

## ಡಾ. ಬಿ.ಆರ್.ಅಂಬೇಡ್ಕರ್ ವಿಶ್ವಕ್ಕೆ ಮಾದರಿ : ಹೆಚ್.ಡಿ.ಆರ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ : ಡಾ. ಬಿ.ಆರ್.ಅಂಬೇಡ್ಕರ್ ಅವರು ವಿಶ್ವಕ್ಕೆ ಮಾದರಿಯಾದ ಸಂವಿಧಾನ ರಚಿಸಿ, ನಮ್ಮ ರಾಷ್ಟ್ರದಲ್ಲಿ ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಜತೆಗೆ ಸಮಾನತೆಯನ್ನು ನೀಡಿದ ಶ್ರೇಷ್ಠವಾದ ಸಂವಿಧಾನ ರಚಿಸಿದ್ದಾರೆ ಇಂತಹ ಸಂವಿಧಾನ ನೀಡಿದ ಅಂಬೇಡ್ಕರ್ ಅವರನ್ನು ಸ್ಮರಿಸಿ ಗೌರವಿಸಲು ಸಂತೋಷವಾಗುತ್ತದೆ ಎಂದು ಶಾಸಕ ಎಚ್.ಡಿ.ರೇವಣ್ಣ ತಿಳಿಸಿದರು.

ಪಟ್ಟಣದಲ್ಲಿ ಆಯೋಜಿಸಿರುವ ಡಾ. ಬಿ.ಆರ್.ಅಂಬೇಡ್ಕರ್ ಅವರ 135 ಜಯಂತೋತ್ಸವದ ಪ್ರಯುಕ್ತ ಡಾ. ಅಂಬೇಡ್ಕರ್ ವೃತ್ತದಲ್ಲಿ ಡಾ. ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ನಮಸ್ಕರಿಸಿ, ಮಾತನಾಡಿದರು. ಡಾ. ಅಂಬೇಡ್ಕರ್ ಅವರ ಮೀಸಲಾತಿ ನೀತಿಯಿಂದ ಶೋಷಿತರು ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯವಾಗಿದೆ ಮತ್ತು ಸಂವಿಧಾನದ ಸಹಾಯದಿಂದ ಸಮಾಜದ ಕಟ್ಟಕಡೆ ವ್ಯಕ್ತಿಯೂ ಅನುಕೂಲ ಪಡೆಯಲು ಸಾಧ್ಯವಾಗಿದೆ ಜತೆಗೆ ಅನೇಕರು ರಾಜಕೀಯದಲ್ಲಿ ಸ್ಥಾನಮಾನ ಪಡೆಯಲೂ ಸಾಧ್ಯವಾಗಿದೆ. ಇಂತಹ ಸಂದರ್ಭದಲ್ಲಿ ಅವರ ಆಶಯದಂತೆ ಶಿಕ್ಷಣಕ್ಕೆ ಹೆಚ್ಚು ಆದ್ಯತೆ ನೀಡಬೇಕಿದೆ ಎಂದರು.



> ಪರಿಶಿಷ್ಟ ಸಮುದಾಯ ನೀಡಿದ ಪ್ರೀತಿ-ವಿಶ್ವಾಸವನ್ನು ನಾವು ಎಂದಿಗೂ ಮರೆಯುವುದಿಲ್ಲ. ಆದರೆ ತಾಲ್ಲೂಕು ಆಡಳಿತ ಇಂತಹ ಕನಿಷ್ಠ ಸೌಜನ್ಯವನ್ನೂ ತೋರಿಸದಿರುವುದು ನೋವುಂಟು ಮಾಡಿದೆ
> -ಎಚ್.ಡಿ.ರೇವಣ್ಣ, ಮಾಜಿ ಸಚಿವ

ತಾ. ಆಡಳಿತದಿಂದ ಆಹ್ವಾನ ನೀಡದೇ ಅವಮಾನ ಮಾಡಿದ್ದಾರೆ ಶಾಸಕ ಎಚ್.ಡಿ.ರೇವಣ್ಣ ಅಸಮಾಧಾನ : ಡಾ. ಬಿ.ಆರ್.ಅಂಬೇಡ್ಕರ್ ಅವರ 135 ನೇ ಜಯಂತಿಯನ್ನು ಆಚರಿಸುತ್ತಿರುವ ತಾ. ಆಡಳಿತ ಕ್ಷೇತ್ರದ ಶಾಸಕನಾದ ನನಗೆ ಆಹ್ವಾನವನ್ನೇ ನೀಡಿಲ್ಲ ಮತ್ತು ಇದಕ್ಕೆ ಕಾರಣವೇನೆಂದು ಗೊತ್ತಿಲ್ಲ. ಅವರು ಯಾವ ಉದ್ದೇಶದಿಂದ ಆಹ್ವಾನ ನೀಡಿಲ್ಲಮೋ ಅಥವಾ ಯಾರಾದರು ಕೊಡಬೇಡಿ ಎಂದು ಹೇಳಿದ್ದಾರೂ ಗೊತ್ತಿಲ್ಲ. ಅವರು ಆಹ್ವಾನ ನೀಡದಿದ್ದರೂ ನಾನು ಅಂಬೇಡ್ಕರ್ ಅವರ ಮೇಲಿನ ಗೌರವದಿಂದ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಡಾ. ಅಂಬೇಡ್ಕರ್ ಜಯಂತಿಯಲ್ಲಿ ಭಾಗವಹಿಸಿದ್ದೇನೆ ಎಂದರು.

ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಎಚ್.ವೈ.ಚಂದ್ರಶೇಖರ್, ಪುರಸಭೆ ಮಾಜಿ ಅಧ್ಯಕ್ಷ ಲಕ್ಷ್ಮಣ, ವಿಶ್ವಜ್ಞಾನಿ ಡಾ. ಬಿ.ಆರ್.ಅಂಬೇಡ್ಕರ್ ಸೇವಾ ಸಮಿತಿ ಟ್ರಸ್ಟ್ ಅಧ್ಯಕ್ಷ ತಾರೇಶ್, ಪ್ರಧಾನ ಕಾರ್ಯದರ್ಶಿ ಕೃಷ್ಣಮೂರ್ತಿ, ಸಂ. ಕಾರ್ಯದರ್ಶಿ ಸುಪ್ರಿತ್ ಪಾಸ್ವಾನ್, ಸದಸ್ಯ ಜವರೇಶ್, ಪ್ರಸನ್ನ, ಕುಮಾರ ಇತರರು ಶಾಸಕ ಎಚ್.ಡಿ.ರೇವಣ್ಣ ಅವರನ್ನು ಸನ್ಮಾನಿಸಿ ಗೌರವಿಸಿದರು.

ಪುರಸಭೆ ಮಾಜಿ ಸದಸ್ಯರಾದ ಉಮೇಶ್ ಹಾಗೂ ಕುಮಾರಸ್ವಾಮಿ, ಡಿಶ್ ಗೋವಿಂದ, ಪುನೀತ್, ಪಾಪಣ್ಣಿ, ಕುಮಾರ್, ಬೈರಾಜು, ವೈರಮುಡಿ, ಇತರರು ಇದ್ದರು.

### ಅಂಬೇಡ್ಕರ್ ಜಯಂತಿಗೆ ರೇವಣ್ಣಗೆ ಆಹ್ವಾನವಿಲ್ಲ? ತಾಲ್ಲೂಕು ಆಡಳಿತ ವಿರುದ್ಧ ಆರೋಪ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮಕ್ಕೆ ತಮ್ಮನ್ನು ಆಹ್ವಾನಿಸದೇ ತಾಲ್ಲೂಕು ಆಡಳಿತ ಉದ್ದೇಶಪೂರ್ವಕವಾಗಿ ಹೀಗೆ ನಡೆದುಕೊಂಡಿದೆ ಎಂದು ಮಾಜಿ ಸಚಿವ ಎಚ್.ಡಿ. ರೇವಣ್ಣ ಗಂಭೀರ ಆರೋಪ ಮಾಡಿದ್ದಾರೆ.

ಹೊಳೆನರಸೀಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ''ನಾನು ನೊಂದು ಹೇಳುತ್ತಿದ್ದೇನೆ. ಇಂತಹ ಪುಣ್ಯ ಸಂದರ್ಭದಲ್ಲಿ ಒಬ್ಬ ಶಾಸಕರಿಗೆ ಆಹ್ವಾನ ಪತ್ರಿಕೆ ನೀಡುವ ಕನಿಷ್ಠ ಸೌಜನ್ಯವೂ ಇಲ್ಲವೇ? ಇದರ ಅರ್ಥವೇನು ಎಂಬುದು ನನಗೆ ತಿಳಿದಿಲ್ಲ. ಯಾರು ಆಹ್ವಾನ ಕೊಡಬೇಡಿ ಎಂದು ಹೇಳಿದ್ದಾರೆ ಎಂಬುದೂ ಗೊತ್ತಿಲ್ಲ'' ಎಂದು ಅಸಮಾಧಾನ ವ್ಯಕ್ತಪಡಿಸಿದರು.

''ಈ ತಾಲ್ಲೂಕಿನ ಪರಿಶಿಷ್ಟ ಸಮುದಾಯದವರು ದೇವೇಗೌಡರಿಗೆ ಮತ್ತು ನನಗೆ ರಾಜಕೀಯ ಶಕ್ತಿ ನೀಡಿದ್ದಾರೆ. ಅದನ್ನು ನಾವು ಎಂದಿಗೂ ಮರೆಯುವುದಿಲ್ಲ. ಜಿಲ್ಲೆಯ ಇತರ ಎಲ್ಲಾ ಶಾಸಕರಿಗೆ ಆಹ್ವಾನ ನೀಡಿದರೂ, ನನಗೆ ಮಾತ್ರ ನೀಡಿಲ್ಲ. ಇದು ಉದ್ದೇಶಪೂರ್ವಕ ಕೃತ್ಯ'' ಎಂದು ಆರೋಪಿಸಿದರು.

> ಎಚ್.ಡಿ.ರೇವಣ್ಣ ಸಾಹೇಬರಿಗೆ ಆಹ್ವಾನ ಪತ್ರ ತಲುಪಿಸಲಾಗಿತ್ತು. ಅವರ ಆಪ್ತ ಸಹಾಯಕ ರವಿ ಅವರನ್ನು ಸಾಹೇಬರು ಮೆರವಣಿಗೆಗೆ ಬರುತ್ತಾರಾ? ನೇರವಾಗಿ ವೇದಿಕೆಗೆ ಬರುತ್ತಾರಾ? ಅಂತಲೂ ಕೇಳಿದ್ದೆ. ಆದರೂ ಅವರು ಯಾಕೆ ಹಾಗೆ ಹೇಳಿದ್ದಾರೋ ಗೊತ್ತಾಗುತ್ತಿಲ್ಲ.
> -ಎಂ.ರೇಣುಕುಮಾರ್, ತಹಸೀಲ್ದಾರ್, ಹೊಳೆನರಸೀಪುರ

## ಅಂಬೇಡ್ಕರ್ ಜಯಂತಿ ಅಂಗವಾಗಿ ಮಾಲಾರ್ಪಣೆ

### ಸಮಾನತೆ ಸಂದೇಶ ಸಾರಿದ ಶಾಸಕ ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಸಂವಿಧಾನ ಶಿಲ್ಪಿ, ಭಾರತರತ್ನ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಜಯಂತಿ ಅಂಗವಾಗಿ ನಗರದ ತಾಲ್ಲೂಕು ಕಚೇರಿ ಮುಂಭಾಗದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಶಾಸಕ ಸಿಮೆಂಟ್ ಮಂಜು ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಡಾ. ಬಿ.ಆರ್. ಅಂಬೇಡ್ಕರ್ ಅವರು ದೇಶಕ್ಕೆ ಸಮಾನತೆ, ಸ್ವಾತಂತ್ರ್ಯ ಮತ್ತು ನ್ಯಾಯದ ಮೌಲ್ಯಗಳನ್ನು ನೀಡಿದ ಮಹಾನ್ ದಾರ್ಶನಿಕರು ಎಂದು ಕೊಂಡಾಡಿದರು. ಸಮಾಜದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಅವರು ಸಲ್ಲಿಸಿದ ಕೊಡುಗೆ ಅಪಾರವಾಗಿದ್ದು, ಅವರ ಆದರ್ಶಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಹೇಳಿದರು.

ಯುವ ಪೀಳಿಗೆ ಅಂಬೇಡ್ಕರ್ ಅವರ ಚಿಂತನೆಗಳನ್ನು ಅಳವಡಿಸಿಕೊಂಡು ಸಮಾನತೆಯ ಸಮಾಜ ನಿರ್ಮಾಣದಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.



ಕಾರ್ಯಕ್ರಮದಲ್ಲಿ ಸಕಲೇಶಪುರ ತಹಶೀಲ್ದಾರ್ ಸುಪ್ರೀತಾ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮೋಹನ್ ಕುಮಾರ್, ಸಕಲೇಶಪುರ ಮಂಡಲ ಬಿಜೆಪಿ ಅಧ್ಯಕ್ಷ ವಳಲಹಳ್ಳಿ ಅಶ್ವತ್, ಬಿಜೆಪಿ ಎಸ್‌ಸಿ ಮೋರ್ಚಾ ತಾಲೂಕು ಅಧ್ಯಕ್ಷ ಸ್ಟೀವನ್ ಪ್ರಕಾಶ್, ಬಿಜೆಪಿ ಮುಖಂಡರಾದ ಗುರು ಪ್ರಶಾಂತ್, ಶರತ್ ವೀರಾಸ್, ಮಾಜಿ ಪುರಸಭಾ ಸದಸ್ಯ ಪ್ರದೀಪ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಸಣ್ಣ ವಯಸ್ಸು ದೊಡ್ಡ ಗೌರವ: ಉಮ್ಮತ್ತೂರಿನಲ್ಲಿ ಅಂಬೇಡ್ಕರ್ ಜಯಂತಿ ವೈಭವ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ತಾಲ್ಲೂಕಿನ ಉಮ್ಮತ್ತೂರು ಗ್ರಾಮದಲ್ಲಿ ಪುಟಾಣಿ ಮಕ್ಕಳೇ ಮುಂದೆ ನಿಂತು ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ವಿಭಿನ್ನ ಹಾಗೂ ಅರ್ಥಪೂರ್ಣವಾಗಿ ಆಚರಿಸಿ ಗಮನ ಸೆಳೆದಿದ್ದಾರೆ.

ಗ್ರಾಮದ ಮಕ್ಕಳು ತಮ್ಮದೇ ಆದ ಚಿಂತನೆ ಮತ್ತು ಉತ್ಸಾಹದಿಂದ ಹಣ ಸಂಗ್ರಹಿಸಿ ಪುಟ್ಟದಾದ ಶೆಡ್ ನಿರ್ಮಿಸಿ, ಅದರಲ್ಲಿ ಅಂಬೇಡ್ಕರ್ ಅವರ ಭಾವಚಿತ್ರವನ್ನು ಪ್ರತಿಷ್ಠಾಪಿಸಿ, ಶೆಡ್‌ಗೆ ಬಾಳೆಕಂದು ತೋರಣ ಕಟ್ಟಿದ್ದು, ಬಲೂನ್‌ಗಳ ಮೂಲಕ ಆಕರ್ಷಕವಾಗಿ ಅಲಂಕರಿಸಲಾಗಿತ್ತು. ಪುಟಾಣಿಗಳ ಈ ಸೃಜನಾತ್ಮಕ ಪ್ರಯತ್ನ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರವಾಯಿತು.

## ''ಮನುಷ್ಯ ಒಂದೇ ಜಾತಿ'' ಎಂದು ಸಾರಿದ ಅಂಬೇಡ್ಕರ್ ಚಿಂತನೆ : ಹುಲ್ಲುಮನಿ ತಿಮ್ಮಣ್ಣ

ಸಕಲೇಶಪುರ: ಜಾತಿ ವ್ಯವಸ್ಥೆಯಿಂದ ಹೊರಬಂದು ಸಂವಿಧಾನದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಕೇವಲ ಆಚರಣೆಗಳಿಗೆ ಸೀಮಿತಗೊಳಿಸಿದರೆ ಮಹನೀಯರ ತತ್ವಗಳು ಉಳಿಯುವುದಿಲ್ಲ ಎಂದು ಉಪವಿಭಾಗಾಧಿಕಾರಿ ಹುಲ್ಲುಮನಿ ತಿಮ್ಮಣ್ಣ ಹೇಳಿದರು.

ಪಟ್ಟಣದ ಅಂಬೇಡ್ಕರ್ ಭವನದಲ್ಲಿ ಸಮಾಜ ಕಲ್ಯಾಣ ಇಲಾಖೆ ಆಯೋಜಿಸಿದ್ದ ಸಂವಿಧಾನ ಶಿಲ್ಪಿ, ವಿಶ್ವನಾಯಕ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಭಾರತದ ಸಂವಿಧಾನವು ಸರ್ವರಿಗೂ ಸಮಾನತೆ ಒದಗಿಸುವುದರ ಜೊತೆಗೆ ಮಾನವ ಬಂಧುತ್ವವನ್ನು ಬೆಳೆಸಿ ವಿಶ್ವಶಾಂತಿಗೆ ಮಹತ್ವದ ಕೊಡುಗೆ ನೀಡುತ್ತಿದೆ ಎಂದು ತಿಳಿಸಿದರು.

ಭಾರತದ ಸಂವಿಧಾನವು ಜಾತ್ಯಾತೀತ, ಧರ್ಮನಿರಪೇಕ್ಷ ಹಾಗೂ ಸಮಾಜವಾದಿ ರಾಷ್ಟ್ರ ನಿರ್ಮಾಣಕ್ಕೆ ದಾರಿ ತೋರಿಸಿದ್ದು, ಪ್ರಜೆಯೇ ಪ್ರಭುಗಳಾಗಿರುವ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಿದೆ ಎಂದರು. ಯುದ್ಧಭೀತಿಯ ಇಂದಿನ ಜಗತ್ತಿನಲ್ಲಿ ಮಾನವೀಯತೆ, ಶಾಂತಿ ಮತ್ತು ಸಹಬಾಳ್ವೆ ಮುಖ್ಯವಾಗಬೇಕು ಎಂದು ಅಭಿಪ್ರಾಯಪಟ್ಟರು.

ಬುದ್ಧ, ಬಸವಣ್ಣ ಹಾಗೂ ಅಂಬೇಡ್ಕರ್ ಅವರ ಚಿಂತನೆಗಳು ''ಮನುಷ್ಯನೇ ಒಂದೇ ಜಾತಿ'' ಎಂಬ ತತ್ವವನ್ನು ಸಾರುತ್ತವೆ. ಜಾತಿ-ಮತ ಭೇದಗಳನ್ನು ಮೀರಿ ಎಲ್ಲರೂ ಒಂದಾಗಬೇಕು ಎಂದು ಅವರು ಕರೆ ನೀಡಿದರು.



ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಮುರಳಿ ಮೋಹನ್ ಮಾತನಾಡಿ, ಮಹನೀಯರ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಲು ಅಧಿಕಾರಿಗಳು ಜವಾಬ್ದಾರಿಯನ್ನು ಹೊತ್ತುಕೊಳ್ಳಬೇಕು ಎಂದು ಮನವಿ ಮಾಡಿದರು. ಅಂಬೇಡ್ಕರ್ ಅವರ ತತ್ವಗಳನ್ನು ಯುವಜನತೆಗೆ ತಲುಪಿಸುವಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಹೇಳಿದರು.

ಉಪನ್ಯಾಸಕ ವೆಂಕಟೇಶ್ ಮಾತನಾಡಿ, ದೇಶದಲ್ಲಿ ಇನ್ನೂ ಮುಂದುವರಿಯುತ್ತಿರುವ ಜಾತಿ ತಾರತಮ್ಯ, ದೌರ್ಜನ್ಯ ಹಾಗೂ ಸಾಮಾಜಿಕ ಅನ್ಯಾಯಗಳ ಬಗ್ಗೆ ಗಂಭೀರವಾಗಿ ಚರ್ಚಿಸಿದರು. ಗ್ರಾಮೀಣ ಪ್ರದೇಶಗಳಲ್ಲಿ ದಲಿತರ ಮೇಲಿನ ಅನ್ಯಾಯಗಳು ಮುಂದುವರಿಯುತ್ತಿರುವುದು ವಿಷಾದಕರವಾಗಿದೆ ಎಂದು ಹೇಳಿದರು.

ರಾಷ್ಟ್ರೀಯ ಅಪರಾಧ ದಾಖಲೆ ಬ್ಯೂರೋ (ಓಅಖಃ) ವರದಿಗಳನ್ನು ಉಲ್ಲೇಖಿಸಿ, ದಲಿತರ ಮೇಲಿನ ಹಿಂಸಾಚಾರ ಗಂಭೀರವಾಗಿದ್ದು, ಸಮಾಜ ಆತ್ಮಪರಿಶೀಲನೆ ಮಾಡಿಕೊಳ್ಳಬೇಕಾಗಿದೆ ಎಂದರು.

ಡಾ. ಬಿ.ಆರ್. ಅಂಬೇಡ್ಕರ್ ಅವರು ಜಾತಿ ನಿರ್ಮೂಲನೆಗಾಗಿ ಜೀವನಪೂರ್ಣ ಹೋರಾಟ ನಡೆಸಿದ್ದು, ಸಮಾನತೆ, ನ್ಯಾಯ ಮತ್ತು ಸಹೋದರತ್ವದ ಮೌಲ್ಯಗಳನ್ನು ಪ್ರತಿಪಾದಿಸಿದ್ದಾರೆ. ಜಾತಿ ಆಧಾರಿತ ಭೇದಭಾವವನ್ನು ತೊಡೆದು ಹಾಕಿ ಸಮಾನತೆಯ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

> ತಾಲೂಕಿನ ವಿವಿಧ ಸರ್ಕಾರಿ ಕಚೇರಿಗಳಲ್ಲಿ ಪ್ರತಿ ವರ್ಷ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಶಿಷ್ಟಾಚಾರದ ಪ್ರಕಾರ ಆಚರಿಸುವುದು ವಾಡಿಕೆ. ಆದರೆ ಈ ಬಾರಿ ತಾಲೂಕು ಕಚೇರಿಯಲ್ಲಿಯೇ ಅಂಬೇಡ್ಕರ್ ಜಯಂತಿಯನ್ನು ಆಚರಿಸದಿರುವುದು ಸಾರ್ವಜನಿಕರ ಹಾಗೂ ವಿವಿಧ ಸಂಘಟನೆಗಳ ಮುಖಂಡರ ಅಸಮಾಧಾನ ವ್ಯಕ್ತಪಡಿಸಿದ್ದಾರೆ.
> ನಾಡಹಬ್ಬ ಹಾಗೂ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿಯ ಅಧ್ಯಕ್ಷರಾಗಿರುವ ತಹಸೀಲ್ದಾರ್ ಅವರು ತಮ್ಮದೇ ಕಚೇರಿಯಲ್ಲಿ ಜಯಂತಿ ಆಚರಣೆ ಮಾಡದಿರುವುದನ್ನು ಮುಖಂಡರು ಸರಿಯಲ್ಲ ಎಂದಿದ್ದಾರೆ.ಶಾಸಕ ಸಿಮೆಂಟ್ ಮಂಜು ಅವರು ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಸಂದರ್ಭದಲ್ಲಿ ಹಾಗೂ ಸಮಾಜ ಕಲ್ಯಾಣ ಇಲಾಖೆಯು ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಅವರು ಭಾಗವಹಿಸಿದ್ದರು. ಹೀಗಿದ್ದರೂ, ಜವಾಬ್ದಾರಿಯುತ ಸ್ಥಾನದಲ್ಲಿರುವ ಅವರು ತಮ್ಮ ಸ್ವಂತ ಕಚೇರಿಯಲ್ಲಿ ಜಯಂತಿ ಆಚರಣೆಯನ್ನು ಕೈಬಿಟ್ಟಿರುವುದು ಸರಿಯಲ್ಲ ಎಂದು ಮುಖಂಡರು ಅಭಿಪ್ರಾಯಪಟ್ಟಿದ್ದಾರೆ.

ಈ ಸಂದರ್ಭದಲ್ಲಿ ಪಟ್ಟಣದ ತಾಲೂಕು ಆಡಳಿತ ಕಚೇರಿ ಎದುರು ಅಂಬೇಡ್ಕರ್ ಅವರ ಪ್ರತಿಮೆಗೆ ಶಾಸಕ ಸಿಮೆಂಟ್ ಮಂಜು ಅವರು ಮಾಲಾರ್ಪಣೆ ಮಾಡಿದರು. ತಾಲೂಕು ಪಂಚಾಯಿತಿ ಆವರಣದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಮುರಳಿ ಮೋಹನ್ ಅವರ ನೇತೃತ್ವದಲ್ಲಿ ಅಂಬೇಡ್ಕರ್ ಜಯಂತಿ ಆಚರಣೆ ನಡೆಯಿತು. ಹಳೆ ಬಸ್ ನಿಲ್ದಾಣದಲ್ಲಿರುವ ಅಂಬೇಡ್ಕರ್ ಪ್ರತಿಮೆಗೆ ಕೂಡ ಮಾಲಾರ್ಪಣೆ ಸಲ್ಲಿಸಲಾಯಿತು.

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಆಯೋಜಿಸಲಾದ ಮೆರವಣಿಗೆ ತಾಲೂಕು ಕಚೇರಿಯಿಂದ ಆರಂಭವಾಗಿ ಹೇಮಾವತಿ ಸೇತುವೆವರೆಗೆ ಸಾಗಿತು. ಅಲ್ಲಿಂದ ಮರುವಾಗಿ ಅಂಬೇಡ್ಕರ್ ಭವನದವರೆಗೆ ಮೆರವಣಿಗೆ ಮುಂದುವರಿಯಿತು. ಮೆರವಣಿಗೆಯಲ್ಲಿ ನಾಸಿಕ್ ಡೋಲುಗಳ ನಾದಕ್ಕೆ ಭಾಗವಹಿಸಿದವರು ಉತ್ಸಾಹದಿಂದ ಹೆಜ್ಜೆ ಹಾಕಿದರು.

ಕಾರ್ಯಕ್ರಮದಲ್ಲಿ ನಗರ ಯೋಜನೆ ಪ್ರಾಧಿಕಾರದ ಅಧ್ಯಕ್ಷ ಸಯದ್ ಮುಫೀಜ್, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಗಂಗಾಧರ್, ಕ್ಷೇತ್ರ ಶಿಕ್ಷಣಾಧಿಕಾರಿ ಪುಷ್ಪ, ಸಿಡಿಪಿಓ ಮಂಗಳಗೌರಿ, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಾಂತ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಮೋಹನ್, ಗ್ರೇಡ್ ಟು ತಹಸಿಲ್ದಾರ್ ಜನಾರ್ಧನ್, ಕಂದಾಯ ನಿರೀಕ್ಷಕ ದಾನ್ ಪ್ರಕಾಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248